# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು** : **ಶ್ರೀ ಸಿ ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **304**

**ಉತ್ತರಿಸಬೇಕಾದ ದಿನಾಂಕ** : **29-01-2026**

**ಉತ್ತರಿಸಬೇಕಾದ ಸಚಿವರು** : **ಸನ್ಮಾನ್ಯ ಮುಖ್ಯಮಂತ್ರಿ**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಶೂನ್ಯ ಬಡ್ಡಿ ದರದ (Zero Percent Interest) ಅಲ್ಪಾವಧಿ ಕೃಷಿ ಸಾಲದ ಮಿತಿ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಶೂನ್ಯ ಬಡ್ಡಿ ದರದ (Zero Percent Interest) ಅಲ್ಪಾವಧಿ ಕೃಷಿ ಸಾಲದ ಮಿತಿಯನ್ನು ರೂ.3.00 ಲಕ್ಷದಿಂದ ರೂ.5.00 ಲಕ್ಷ ದವರೆಗೆ ಈಗಾಗಲೇ ಸರ್ಕಾರದ ಆದೇಶ ಸಂಖ್ಯೆ: ಸಿಒ 167 ಸಿಎಲ್‌ಎಸ್ 2023, ದಿನಾಂಕ:08.09.2023ರಲ್ಲಿ ಹೆಚ್ಚಿಸಲಾಗಿದೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಹಾನಿಗೊಳಗಾದ ರೈತರ ಎಷ್ಟು ಮೊತ್ತದ ಸಾಲವನ್ನು ಮನ್ನಾ ಮಾಡಲಾಗಿದೆ ಅಥವಾ ಮರುಪಾವತಿ ಅವಧಿಯನ್ನು ವಿಸ್ತರಿಸಲಾಗಿದೆ; | ಕಳೆದ ಮೂರು ವರ್ಷಗಳಲ್ಲಿ ರೈತರ ಸಾಲವನ್ನು ಮನ್ನಾ ಮಾಡಿರುವುದಿಲ್ಲ ಹಾಗೂ ಸಾಲ ಮರುಪಾವತಿ ಅವಧಿಯನ್ನು ವಿಸ್ತರಿಸಲು ಬೇಡಿಕೆ ಇಲ್ಲದಿರುವುದರಿಂದ ವಿಸ್ತರಿಸಿರುವುದಿಲ್ಲ. |
| ಇ) | ಸಾಲ ಮನ್ನಾ ಯೋಜನೆಯಡಿ ಬಾಕಿ ಇರುವ ಅನುದಾನವನ್ನು ಸರ್ಕಾರವು ಸಹಕಾರ ಬ್ಯಾಂಕುಗಳಿಗೆ ಯಾವಾಗ ಬಿಡುಗಡೆ ಮಾಡಲಿದೆ? | 2018ನೇ ಸಾಲಿನ ರೂ.1.00 ಲಕ್ಷಗಳ ಸಾಲ ಮನ್ನಾ ಯೋಜನೆಯಡಿಯಲ್ಲಿ ಸಹಕಾರ ಸಂಸ್ಥೆಗಳಿಗೆ ಬಿಡುಗಡೆಗೆ ಬಾಕಿ ಇರುವ ರೂ.232 ಕೋಟಿಗಳನ್ನು ಬಿಡುಗಡೆಗೊಳಿಸುವ ಬಗ್ಗೆ, ಕಡತ ಸಂಖ್ಯೆ: ಸಿಒ 298 ಸಿಎಲ್‌ಎಸ್ 2020 ರ ಮೂಲಕ ಪರಿಶೀಲಿಸಿ, ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಿದ್ದು, ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |

**ಕಡತ ಸಂಖ್ಯೆ: ಸಿಒ 42 ಸಿಎಲ್‌ಎಸ್ 2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ